# ಉಪತಹಶೀಲ್ದಾರವರ ನ್ಯಾಯಾಲಯ, ಕೋಗಳಿ, ಹ.ಬೊ.ಹಳ್ಳಿ ತಾಲೂಕು.

ಸಂ/ಕಂ/ಪಹಣಿ/ವಿವಾದ/80/2015-16 ದಿನಾಂಕ:20.10.2016

ಉಪಸ್ಥಿತರು:-ವಿ.ಹೆಚ್.ಮಲ್ಲಿಕಾರ್ಜುನ,
ಉಪ ತಹಶೀಲ್ದಾರರು,
ನಾಡ ಕಾರ್ಯಾಲಯ, ಕೋಗಳಿ

| ಅರ್ಜಿದಾರರು | ತಕರಾರುದಾರರು |
|---|---|
| ಹೊಸಕೇರಿ ಕೊಟ್ರೇಶ ತಂದೆ ಲೇಟ್ ಶರಣಪ್ಪ<br>ಗ್ರಾಮ:-ಬೆಣಕಲ್ಲು ತಾ:-ಹೆಚ್.ಬಿ.ಹಳ್ಳಿ | ಕಂದಾಯ ನಿರೀಕ್ಷಕರು, ಕೋಗಳಿ |

**ವಿವಾದಿತಜಮೀನಿನ ವಿವರ:**

| ಕ್ರ.ಸಂ. | ತಾಲೂಕು | ಗ್ರಾಮದ ಹೆಸರು | ಸ.ನಂ. | ವಿಸ್ತೀರ್ಣ(ಎಕರೆಗಳಲ್ಲಿ) | ತರಹೆ |
|---|---|---|---|---|---|
| 1. | ಹಗರಿಬೊಮ್ಮನಹಳ್ಳಿ | ಬೆಣಕಲ್ಲು | 285/ಎ/1 | 4-75 | ಖುಷ್ಕಿ |

**ಪೀಠಿಕೆ:-**

ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಬೆಣಕಲ್ಲು ಗ್ರಾಮದ ವಿವಾದಿತ ಜಮೀನಿಗೆ ಸಂಬಂಧಿಸಿದಂತೆ, ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಬೆಣಕಲ್ಲು ಗ್ರಾಮದ ನಿವಾಸಿಯಾದ ಹೊಸಕೇರಿ ಕೊಟ್ರೇಶ ತಂದೆ ಲೇಟ್ ಶರಣಪ್ಪ ಇವರು ಪೌತಿ ವಾರಸು ಪ್ರಕಾರ ಹಕ್ಕುಬದಲಾವಣೆಯನ್ನು ಮಾಡಲು ದಿನಾಂಕ:15.10.2015 ರಂದು ಅರ್ಜಿಯನ್ನು ಸಲ್ಲಿಸಿರುತ್ತಾರೆ. ಗ್ರಾಮದಲ್ಲಿ ನಮೂನೆ-21 ರ ನೋಟೀಸನ್ನು ದಿನಾಂಕ:02.11.2015 ರಂದು ಜಾರಿಮಾಡಲಾಗಿ, ನಿಗದಿತ ಅವಧಿಯೊಳಗೆ ಲಿಖಿತವಾಗಿ ಆಕ್ಷೇಪಣೆ ಸಲ್ಲಿಸಿರುವುದಿಲ್ಲ. ವಂಶವೃಕ್ಷದ ಪ್ರಕಾರ ಹೆಣ್ಣು ಮಕ್ಕಳು ಸಹಿ ಮಾಡಲು ನಿರಾಕರಿಸಿರುತ್ತಾರೆ. ಕಾರಣ, ಎಂ.ಆರ್.ನಂ.60/15-16ರ ಕಡತವು ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಕಂದಾಯ ನಿರೀಕ್ಷಕರು, ಕೋಗಳಿ ಇವರು ಈ ಕಾರ್ಯಾಲಯಕ್ಕೆ ವರದಿ ಸಲ್ಲಿಸಿರುತ್ತಾರೆ. ಅರ್ಜಿದಾರರಿಗೆ ದಿನಾಂಕ:04.03.2016ಕ್ಕೆ ವಿಚಾರಣೆಗೆ ಹಾಜರಾಗಲು ನೋಟೀಸನ್ನು ಜಾರಿ ಮಾಡಲಾಯಿತು.

ಪ್ರಕರಣವನ್ನು ದಿನಾಂಕ:04.03.2016 ರಿಂದ 22.09.2016 ರವರೆಗೆ ವಿಚಾರಣೆಯನ್ನು ಮಾಡಲಾಯಿತು. ಅರ್ಜಿದಾರರು ಮತ್ತು ವಂಶವೃಕ್ಷದಲ್ಲಿರುವ ವಾರಸುದಾರರು ಹಾಜರಾಗಿರುತ್ತಾರೆ. ವಂಶವೃಕ್ಷದಲ್ಲಿರುವ ವಾರಸುದಾರರು ಹೇಳುವಂತೆ; ಸದರಿ ಜಮೀನಿಗೆ ಅರ್ಜಿದಾರರ ಹೆಸರಿಗೆ ಪೌತಿ ವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ನಮ್ಮಗಳ ಯಾವುದೇ ತಂಟೆ, ತಕರಾರು ಇರುವುದಿಲ್ಲ ಎಂದು ಮೌಖಿಕವಾಗಿ ಹೇಳಿಕೆಯನ್ನು ನೀಡಿರುತ್ತಾರೆ. ಹಾಗೂ ದಿ:ಸುವರ್ಣಮ್ಮ ಗಂಡ ಲೇಟ್ ಶರಣಪ್ಪ ಇವರ ಹೆಸರಿನಲ್ಲಿ ಕಂದಾಯ ಲೆಕ್ಕದಲ್ಲಿ ಪಹಣಿ ದಾಖಲೆ ಇದ್ದು, ಇವರು ಪೌತಿಯಾಗಿರುವುದರಿಂದ ಹೆಚ್.ಕೊಟ್ರೇಶಪ್ಪ ತಂದೆ ಲೇಟ್ ಶರಣಪ್ಪ ಇವರ ಹೆಸರಿಗೆ ಖಾತೆ ಬದಲಾವಣೆ ಮಾಡಲು ನಮ್ಮಗಳ ಯಾವುದೇ ತಂಟೆ, ತಕರಾರು ಇರುವುದಿಲ್ಲ ಎಂದು ಲಿಖಿತವಾಗಿ ಸಮ್ಮತಿಸಿ ಒಪ್ಪಿಗೆ ಪತ್ರವನ್ನು ಹಾಜರುಪಡಿಸಿರುತ್ತಾರೆ.

ಪ್ರಕರಣದಲ್ಲಿ ಅರ್ಜಿದಾರರು ಮತ್ತು ವಾರಸುದಾರರು ನೀಡಿದ ಹೇಳಿಕೆ ಮತ್ತು ದಾಖಲೆಗಳನ್ನು ಪರಿಶೀಲನೆ ಮಾಡಲಾಗಿ, ಅರ್ಜಿದಾರರ ಹೆಸರಿಗೆ ಪೌತಿ ವಾರಸು ಪ್ರಕಾರ ಹಕ್ಕುಬದಲಾವಣೆ ಮಾಡಲು ಈ ಕೆಳಕಂಡಂತೆ ಆದೇಶ;

**-:ಆದೇಶ:-**

ಪೀಠಿಕೆಯಲ್ಲಿ ವಿವರಿಸಿದ ಸಂದರ್ಭ, ವಾಸ್ತವಾಂಶ, ಹಿನ್ನಲೆ ಮತ್ತು ಕಾರಣಗಳ ಆಧಾರದ ಮೇಲೆ ಎಂ.ಆರ್.ನಂ.60/2015-16ರ ಪ್ರಕಾರ, ಪ್ರಕರಣದಲ್ಲಿ ಬೆಣಕಲ್ಲು ಗ್ರಾಮದ ಸ.ನಂ.285/ಎ/1 ವಿಸ್ತೀರ್ಣ 4-75 ಎಕರೆ ಜಮೀನು ಅರ್ಜಿದಾರರಾದ ಹೊಸಕೇರಿ ಕೊಟ್ರೇಶ ತಂದೆ ಲೇಟ್ ಶರಣಪ್ಪ ಇವರ ಹೆಸರಿಗೆ ಪೌತಿ ವಾರಸು ಪ್ರಕಾರ ಹಕ್ಕುಬದಲಾವಣೆ ಮಾಡಲು ಆದೇಶಿಸಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕೀಕರಣ ಮಾಡಿಸಿ, ತಪ್ಪುಗಳನ್ನು ಸರಿಪಡಿಸಿ, ಈ ದಿನ ದಿನಾಂಕ:20.10.2016 ರಂದು ತೆರದ ನ್ಯಾಯಾಲಯದಲ್ಲಿ ಘೋಷಿಸಿದೆ.

20/10/16

[ವಿ.ಹೆಚ್.ಮಲ್ಲಿಕಾರ್ಜುನ]
ಉಪತಹಶೀಲ್ದಾರರು,
ನಾಡ ಕಾರ್ಯಾಲಯ,ಕೋಗಳಿ
ಕೋಗಳಿ.

ಪ್ರತಿಯನ್ನು:-

1. ಅರ್ಜಿದಾರರು ಮತ್ತುತಕರಾರುದಾರರಿಗೆ.
2. ಭೂಮಿಕೇಂದ್ರ, ತಾಲೂಕುಕಛೇರಿ, ಹಗರಿಬೊಮ್ಮನಹಳ್ಳಿ ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
3. ಕಂದಾಯ ನಿರೀಕ್ಷಕರು, ಕೋಗಳಿ.
4. ಶುದ್ಧಪ್ರತಿಕಡತಕ್ಕೆ.

8/11/16